# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀ ಕಂಠಿ ವೀರೇಶ್, ಅಧ್ಯಕ್ಷರು, ನಂದಿಹಳ್ಳಿ ಗ್ರಾಮ ಪಂಚಾಯಿತಿ, ಹಡಗಲಿ ತಾಲ್ಲೂಕು, ಬಳ್ಳಾರಿ ಜಿಲ್ಲೆ, ಇವರ ವಿರುದ್ಧ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 43(ಎ) ರನ್ವಯ ಕ್ರಮ ಕೈಗೊಳ್ಳುವ ಬಗ್ಗೆ.

**ಓದಲಾಗಿದೆ:**

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬಳ್ಳಾರಿ ಇವರ ಪತ್ರ ಸಂಖ್ಯೆ ಜಿಪಂಬ/ಸಿಬ್ಬಂದಿ(3)/ಸಿಸಿಎ/06/2016-17/2483 ದಿನಾಂಕ:07.12.2016
2. ಸರ್ಕಾರದ ಪತ್ರ ಸಂಖ್ಯೆ: ಸಂ.ಗ್ರಾಅಪ:1183:ಗ್ರಾಪಂಅ:2016, ದಿನಾಂಕ:21.01.2017 ರ ಕಾರಣ ಕೇಳುವ ನೋಟಿಸ್ಸು.
3. ಶ್ರೀ ಕಂಠಿ ವೀರೇಶ್, ಅಧ್ಯಕ್ಷರು, ನಂದಿಹಳ್ಳಿ ಗ್ರಾಮ ಪಂಚಾಯಿತಿ ಇವರು ಕಾರಣ ಕೇಳುವ ನೋಟಿಸ್‌ಗೆ ನೀಡಿರುವ ಲಿಖಿತ ಹೇಳಿಕೆ ದಿನಾಂಕ: 18.02.2017.

**ಪ್ರಸ್ತಾವನೆ :**

ಮೇಲೆ ಓದಲಾದ ಕ್ರಮ ಸಂಖ್ಯೆ: (1) ರ ದಿನಾಂಕ: 07.12.2016 ರಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಬಳ್ಳಾರಿ ಜಿಲ್ಲೆ, ರವರ ಪ್ರಸ್ತಾವನೆಯಲ್ಲಿ, ಕಾರ್ಯ ನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ ಹಡಗಲಿ ರವರು ನಂದಿಹಳ್ಳಿ ಗ್ರಾಮ ಪಂಚಾಯಿತಿಯಲ್ಲಿನ ಅವ್ಯವಹಾರಕ್ಕೆ ಸಂಬಂಧಿಸಿದಂತೆ ಸಲ್ಲಿಸಿದ ವರದಿಯಂತೆ, ಶ್ರೀ ಶೇಖರಪ್ಪ ಮಡಿವಾಳ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ನಂದಿಹಳ್ಳಿ ಗ್ರಾಮ ಪಂಚಾಯಿತಿ, ಹಡಗಲಿ ತಾಲ್ಲೂಕು, ಬಳ್ಳಾರಿ ಜಿಲ್ಲೆ, ಇವರು ನಂದಿಹಳ್ಳಿ ಗ್ರಾಮ ಪಂಚಾಯಿತಿಯಲ್ಲಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದ ಸಮಯದಲ್ಲಿ ಮಹಾತ್ಮಾ ಗಾಂಧಿ ರಾಷ್ಟ್ರೀಯ ಗ್ರಾಮೀಣಾ ಉದ್ಯೋಗ ಖಾತ್ರಿ ಯೋಜನೆಯಡಿಯಲ್ಲಿ 2015-16 ನೇ ಸಾಲಿನ ಕಾಮಗಾರಿಗಳಲ್ಲಿ ಹುಗಲೂರು ತಾಂಡ ಗ್ರಾಮದ ಹೊನ್ನ ನಾಯ್ಕನ ಮನೆಯ ಮುಂದೆ ತಗ್ಗು ಮುಚ್ಚಿ ಸಮತಟ್ಟು ಮಾಡುವ ಕಾಮಗಾರಿಯಲ್ಲಿ ಮಸ್ಟರ್ ರೋಲ್ ಸಂ.5922 ರಲ್ಲಿ ದಿ:30.12.2015 ರಿಂದ 14.01.2016 ರವರೆಗೆ ಎನ್.ಎಂ.ಆರ್. ತೆಗೆದು ಸದರಿ ಎನ್.ಎಂ.ಆರ್. ನಂತೆ ಕಾರ್ಯನಿರ್ವಹಿಸಿದ 06 ಜನರಿಗೆ ಕೂಲಿ ಪಾವತಿಸಿರುತ್ತಾರೆ. ಈ ಪೈಕಿ ದೂಪದ ರಾಮಪ್ಪ ಇವರು ದಿ:30.04.2015 ರಂದು ಮರಣ ಹೊಂದಿದ್ದು, ಮರಣ ಹೊಂದಿದವರ ಹೆಸರಿನಲ್ಲಿ ಎನ್.ಎಂ.ಆರ್ ಸೃಷ್ಟಿಸಿ ಕಾರ್ಯನಿರ್ವಹಿಸಿರುವುದಾಗಿ ದಾಖಲಿಸಿ ಸದರಿಯವರ ಹೆಸರಿಗೆ ಎಫ್.ಟಿ.ಓ ಮೂಲಕ ರೂ.2856/- ಗಳನ್ನು ಪಾವತಿಸಿರುತ್ತಾರೆ ಮತ್ತು ಎನ್.ಎಂ.ಆರ್ ಹಾಜರಾತಿಯನ್ನು ಕಾಯಕ ಬಂಧು/ಗ್ರಾಮ ಕೂಲಿ ಸಹಾಯಕರಿಂದ ಪಡೆಯದೇ ತಾವೇ ಹಾಜರಾತಿ ಪಡೆದು ದೃಢೀಕರಿಸಿರುತ್ತಾರೆ. ಈ ಹಿನ್ನೆಲೆಯಲ್ಲಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಶ್ರೀ ಶೇಖರಪ್ಪ ಮಡಿವಾಳರ ಅವರನ್ನು ಕರ್ತವ್ಯದಿಂದ ಅಮಾನತ್ತುಗೊಳಿಸಿದೆ. ಹಾಗೂ ಶ್ರೀ ಚಂದ್ರಪ್ಪ ತಾಂತ್ರಿಕ ಸಹಾಯಕರು, ಅವರ ಸೇವೆಯನ್ನು ಹಿಂಪಡೆಯಲು ಸಂಬಂಧಿಸಿದ ಏಜೆನ್ಸಿಗೆ ಸಹ ಸೂಚಿಸಿದ್ದಾರೆ.

ಹಾಗೂ ಮಹಾತ್ಮಾ ಗಾಂಧಿ ರಾಷ್ಟ್ರೀಯ ಗ್ರಾಮೀಣಾ ಉದ್ಯೋಗ ಖಾತ್ರಿ ಯೋಜನೆಯಡಿಯಲ್ಲಿ ನಂದಿಹಳ್ಳಿ ಗ್ರಾಮ ಪಂಚಾಯಿತಿಯಲ್ಲಿ 2015-16 ಹಾಗೂ 2016-17 ನೇ ಸಾಲಿನಲ್ಲಿ ಅನುಷ್ಠಾನಗೊಂಡ ದನದ ಕೊಟ್ಟಿಗೆ ಕಾಮಗಾರಿಯಲ್ಲಿ ಗ್ರಾಮ ಪಂಚಾಯಿತಿಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಶ್ರೀ ಶೇಖರಪ್ಪ ಮಡಿವಾಳರ, ಅಧ್ಯಕ್ಷರಾದ ಶ್ರೀ ಕಂಠಿ ವೀರೇಶ್ ಹಾಗೂ ತಾಂತ್ರಿಕ ಸಹಾಯಕರಾದ ಶ್ರೀ ಎಂ.ಚಂದ್ರಪ್ಪ ಇವರುಗಳು ರೂ.2,42,296/- ಗಳ ಹಣ ದುರುಪಯೋಗ ಪಡಿಸಿಕೊಂಡಿರುತ್ತಾರೆಂದು ತಿಳಿಸಿರುತ್ತಾರೆ.

ಸದರಿ ಯೋಜನೆಯ ಮಾರ್ಗಸೂಚಿಗಳನ್ನು ನಿಯಮಗಳನ್ನು ಪಾಲಿಸದೇ ಹಣದುರುಪಯೋಗ ಹಾಗೂ ಕರ್ತವ್ಯಲೋಪ ಎಸಗಿದ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಶ್ರೀ ಶೇಖರಪ್ಪ ಮಡಿವಾಳರ ಹಾಗೂ ಅಧ್ಯಕ್ಷರಾದ ಶ್ರೀ ಕಂಠಿ ವೀರೇಶ್ ಅವರ ಮೇಲೆ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ ಹಡಗಲಿ ಅವರು ದಿ:05.10.2016 ರಂದು ಐಪಿಸಿ ಕಲಂ 1860(ಯು/ಎಸ್34,408,409) ಅಡಿ ಪ್ರಕರಣ ದಾಖಲಿಸಿರುತ್ತಾರೆ. ಅದರನ್ವಯ ಶ್ರೀ ಕಂಠಿ ವೀರೇಶ್, ಅಧ್ಯಕ್ಷರು, ನಂದಿಹಳ್ಳಿ ಗ್ರಾಮ ಪಂಚಾಯಿತಿ, ಹಡಗಲಿ ತಾಲ್ಲೂಕು ಅವರ ಮೇಲೆ ಹಡಗಲಿ ಪೋಲೀಸ್ ಠಾಣೆಯಲ್ಲಿ ಕ್ರಿಮಿನಲ್ ಮೊಕದ್ದಮೆ ದಾಖಲಾಗಿರುವ ಹಿನ್ನೆಲೆಯಲ್ಲಿ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993 ರ 43(ಎ) ರಡಿಯಲ್ಲಿ ಶಿಸ್ತು ಕ್ರಮಕೈಗೊಳ್ಳಲು ಹಾಗೂ ಮುಂದಿನ ಅಗತ್ಯ ಕ್ರಮಕ್ಕಾಗಿ ದಾಖಲೆಗಳೊಂದಿಗೆ ವರದಿ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (2) ರಂತೆ ದಿನಾಂಕ: 21.01.2017 ರಲ್ಲಿ ಸದರಿಯವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾಯ್ದೆ 1993 ರ ಪ್ರಕರಣ 43-ಎ ಅಡಿಯಲ್ಲಿ ಕ್ರಮ ವಹಿಸುವ ಪೂರ್ವದಲ್ಲಿ ನಿಯಮಾನುಸಾರ ಕಾರಣ ಕೇಳುವ ನೋಟಿಸ್ಸನ್ನು ಜಾರಿ ಮಾಡಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (3) ರಂತೆ ದಿನಾಂಕ: 18.02.2017 ರಲ್ಲಿ ಸದರಿಯವರು ತಮ್ಮ ಲಿಖಿತ ಹೇಳಿಕೆಯನ್ನು ಸರ್ಕಾರಕ್ಕೆ ಸಲ್ಲಿಸಿದ್ದು, ಅದರಲ್ಲಿ ಈ ಕೆಳಕಂಡಂತೆ ತಿಳಿಸಿರುತ್ತಾರೆ.

ಸದರಿಯವರು ಕಾರಣ ಕೇಳುವ ನೋಟಿಸ್ಸನ್ನು ದಿನಾಂಕ:07.02.2017 ರಂದು ಸ್ವೀಕರಿಸಿರುವುದಾಗಿ ತಿಳಿಸಿರುತ್ತಾರೆ ಹಾಗೂ ಅವರ ಮೇಲಿನ ಆರೋಪದ ವಿರುದ್ಧ ಮಾನ್ಯ ಸಿವಿಲ್ 3ನೇ ಅಪರ ಜಿಲ್ಲಾ ಮತ್ತು ಸೆಷನ್ ನ್ಯಾಯಾಲಯದಲ್ಲಿ ದಿನಾಂಕ:03.11.2016 ರಂದು cril. M.P No:53/2016, 5354/2016 ಮತ್ತು 5346/2016 ಮೇಲೆ ಜಾಮೀನು ಪಡೆದಿರುವುದಾಗಿಯೂ, ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣಾ ಉದ್ಯೋಗ ಖಾತ್ರಿ ಯೋಜನೆಯಡಿ ನಂದಿಹಳ್ಳಿ ಗ್ರಾಮದಲ್ಲಿ 2015-16 ರಲ್ಲಿ ಅನುಷ್ಠಾನಗೊಂಡ ಧನದ ಕೊಟ್ಟಿಗೆ ಕಾಮಗಾರಿಯಲ್ಲಿ ಒಂದು ಘಟಕದ ಮೊತ್ತ ರೂ.16,500/-, ಅದರಲ್ಲಿ ಕೂಲಿ ಮೊತ್ತ ರೂ.9,932/- ಗಳಾಗಿದ್ದು, ನಮೂನೆ 6 ಮತ್ತು 8 ನ್ನು ಕೊಡುವ ಕೆಲಸ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ರವರದಾಗಿದ್ದು, ತಾಂತ್ರಿಕ ಸಹಾಯಕರು ಕೆಲಸದ ಎಸ್ಟಿಮೆಂಟನ್ನು ತಯಾರಿಸಿಕೊಡುತ್ತಾರೆ, ಕಂಪ್ಯೂಟರ್ ಆಪರೇಟರ್‌ರವರು ಹಾಜರಾತಿಯನ್ನು ತೆಗೆದುಕೊಳ್ಳುತ್ತಾರೆ, ತಾಂತ್ರಿಕ ಸಹಾಯಕರು ಕೆಲಸವನ್ನು ನೋಡಿ ಎಂ ಬಿ ಯನ್ನು ಬರೆಯುತ್ತಾರೆಂದು ತಿಳಿಸಿರುತ್ತಾರೆ.

ದಿನಾಂಕ:07.09.2015 ರಂದು ಸದರಿಯವರೆ ಖುದ್ದಾಗಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಬಳ್ಳಾರಿರವರಿಗೆ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ರವರ ವಿರುದ್ಧ ದೂರು ನೀಡಿದ್ದಾಗಿ ಹಾಗೂ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ರವರನ್ನು ವರ್ಗಾವಣೆ ಮಾಡಿ ಬೇರೆ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯನ್ನು ನಮ್ಮ ಪಂಚಾಯಿತಿಗೆ ಕಳುಹಿಸಿಕೊಡಬೇಕೆಂದು ಕೋರಿರುವುದಾಗಿ ತಿಳಿಸಿರುತ್ತಾರೆ. ಪುನ: ದಿನಾಂಕ:17.12.2015 ರಂದು ಕಾರ್ಯನಿರ್ವಾಹಕ ಅಧಿಕಾರಿ, ಬಳ್ಳಾರಿರವರಿಗೆ ಪತ್ರಬರೆದಿದ್ದು, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ರವರ ಹೆಚ್ಚುವರಿ ಜವಬ್ದಾರಿಯನ್ನು ಹಿಂಪಡೆಯುವಂತೆ ಮೂಲ ಪಂಚಾಯಿತಿಯಲ್ಲಿ ಮಾತ್ರ ಕೆಲಸ ಮಾಡುವಂತೆ ಪತ್ರ ಬರೆದಿರುವುದಾಗಿ ತಿಳಿಸಿರುತ್ತಾರೆ.

ದಿನಾಂಕ:28.03.2016 ರಂದು ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಪಂಚಾಯಿತಿಗೆ ನಿಯೋಜಿಸಲಾದ ತಾಂತ್ರಿಕ ಸಹಾಯಕರಾದ ಶ್ರೀ ಚಂದ್ರಪ್ಪರವರು ಸ್ಥಳ ಪರಿಶೀಲನೆ ಮಾಡದೆ ಸರಿಯಾಗಿ ಪಂಚಾಯಿತಿಗೆ ಭೇಟಿ ನೀಡದೆ ಬೇರೆಯವರ ಒತ್ತಡಕ್ಕೆ ಮಣಿದು ಅಳತೆ ಪುಸ್ತಕದಲ್ಲಿ ಅಳತೆಯನ್ನು ನಮೂದಿಸುತ್ತಿದ್ದು, ಇದರಿಂದ ಸಮಸ್ಯೆಗಳು ಹೆಚ್ಚಾಗಿರುವುದರಿಂದ ಬೇರೆ ತಾಂತ್ರಿಕ ಸಹಾಯಕರನ್ನು ನಿಯೋಜಿಸುವಂತೆ ಕಾರ್ಯನಿರ್ವಾಹಕ ಅಧಿಕಾರಿ ರವರಿಗೆ ಪತ್ರ ಬರೆದಿರುತ್ತಾರೆಂದು ತಿಳಿಸಿರುತ್ತಾರೆ. ದಿನಾಂಕ:24.04.2016 ರಂದು ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್, ಸಚಿವರಿಗೂ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಶ್ರೀ ಶೇಖರಪ್ಪ ಮಡಿವಾಳರ ರವರು ಸರಿಯಾಗಿ ಕೆಲಸ ನಿರ್ವಹಿಸುತ್ತಿಲ್ಲವೆಂದು ದೂರು ನೀಡಿರುವುದಾಗಿ ತಿಳಿಸಿರುತ್ತಾರೆ.

ನಂದಿಹಳ್ಳಿ ಗ್ರಾಮದವರಾದ ಶ್ರೀ ಭಾಸ್ಕರ ಜಿ ಎಂಬುವವರು ದಿನಾಂಕ:05.08.2016 ರಂದು ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ರವರಿಗೆ ಪತ್ರ ಬರೆದಿದ್ದು, ಶ್ರೀಮತಿ ಜಿ.ಹಾಲಮ್ಮರವರು ದಿನಾಂಕ:15.12.2011 ರಂದು ಮರಣ ಹೊಂದಿರುವುದರಿಂದ ಉದ್ಯೋಗ ಖಾತರಿಯಲ್ಲಿ ಜಾಬ್ ಕಾರ್ಡ್‌ನಿಂದ, ಜಿ ಹಾಲಮ್ಮನ ಹೆಸರನ್ನು ತೆಗೆದು ಹಾಕುವಂತೆ ತಿಳಿಸಿರುತ್ತಾರೆ. ಆದಾಗ್ಯೂ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯವರು ಹೆಸರನ್ನು ತೆಗೆದುಹಾಕದೆ ಅವರ ಖಾತೆಗೆ ರೂ.1,344/- ಗಳನ್ನು ಶ್ರೀಮತಿ ಜಿ.ಹಾಲಮ್ಮರವರ ಹೆಸರಿಗೆ ಹಣ ಜಮಾ ಮಾಡಿರುತ್ತಾರೆ. ವಿಷಯ ತಿಳಿದ ಬಳಿಕ ಸಂಬಂಧ ಪಟ್ಟ ಖಾತೆಗೆ ಮರು ಪಾವತಿಸಿರುವುದರಿಂದ ಹಣಕಾಸಿನ ದುರುಪಯೋಗವಾಗಿರುವುದಿಲ್ಲವೆಂದು ತಿಳಿಸಿರುತ್ತಾರೆ.

ದಿನಾಂಕ:05.10.2016 ರಂದು ಹಡಗಲಿ ಪೋಲೀಸ್ ಠಾಣೆಯಲ್ಲಿ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ ಹಡಗಲಿ ರವರು ದಿನಾಂಕ:05.10.2016 ರಂದು ಪೋಲೀಸ್ ಠಾಣೆಗೆ ದೂರು ನೀಡಿದ್ದು, ನಂದಿಹಳ್ಳಿ ಗ್ರಾಮ ಪಂಚಾಯಿತಿಯಲ್ಲಿ, 2015-16, 2016-17 ನೇ ಸಾಲಿನಲ್ಲಿ ಮಹಾತ್ಮಾ ಗಾಂಧಿ ರಾಷ್ಟ್ರೀಯ ಗ್ರಾಮೀಣಾ ಉದ್ಯೋಗ ಖಾತ್ರಿ ಯೋಜನೆಯಡಿಯಲ್ಲಿ, 38 ದನದ ಕೊಟ್ಟಿಗೆ ಕಾಮಗಾರಿಗಳಲ್ಲಿ, ದನದ ಕೊಟ್ಟಿಗೆ ಫಲಾನುಭವಿಗಳು, ದನದ ಕೊಟ್ಟಿಗೆಗಳನ್ನು ನಿರ್ಮಿಸಿಕೊಳ್ಳದಿದ್ದರೂ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಅಧ್ಯಕ್ಷರು ಹಾಗೂ ತಾಂತ್ರಿಕ ಸಹಾಯಕರು ಕಾಮಗಾರಿಗಳನ್ನು ಪೂರೈಸದ ಫಲಾನುಭವಿಗಳ ಖಾತೆಗೆ ಒಟ್ಟು ರೂ.2,42,296/-

ಹಣವನ್ನು ಫಲಾನುಭವಿಗಳ ಖಾತೆಗೆ ಪಾವತಿ ಮಾಡಿ, ಸರ್ಕಾರದ ಹಣ ದುರುಪಯೋಗ ಮಾಡಿರುತ್ತಾರೆಂದು ಸತ್ತವರ ಹೆಸರಿನಲ್ಲಿಯೂ ಎನ್‌ಎಂಆರ್ ಸೃಜಿಸಿರುವುದಾಗಿ, ಈ ವಿಚಾರದಲ್ಲಿ ಸದರಿಯವರ ಪಾತ್ರ ಯಾವುದೂ ಇರುವುದಿಲ್ಲವೆಂದು ತಿಳಿಸಿರುತ್ತಾರೆ.

ದಿನಾಂಕ: 08.11.2016 ರ ಆಡಿಟ್ ವರದಿಯಲ್ಲಿ ಜಿಲ್ಲಾ ಪಂಚಾಯಿತಿಯ ಮುಖ್ಯಲೆಕ್ಕಾಧಿಕಾರಿಗಳು ತಮ್ಮ ಆಂತರಿಕ ತನಿಖಾ ವರದಿಯಲ್ಲಿ ನರೇಗಾ ಯೋಜನೆಯಡಿಯಲ್ಲಿ ಪಾವತಿಸಿದ ಮೊತ್ತಕ್ಕೆ ಓಚರ್‌ಗಳನ್ನು ಸಮರ್ಪಕವಾಗಿ ನಿರ್ವಹಿಸದಿರುವುದು ಹಾಗೂ ಸದರಿ ಯೋಜನೆಗೆ ಸಂಬಂಧಪಟ್ಟಂತೆ ಕಾಮಗಾರಿಗಳ ಅನುಷ್ಠಾನದ ಮೇಲ್ವಿಚಾರಣೆಯನ್ನು ಹಾಗೂ ಕಡತಗಳ ಪರಿಶೀಲನೆ ಮಾಡುವಲ್ಲಿ ಸಹಾಯಕ ನಿರ್ದೇಶಕರು (ಗ್ರಾ.ಉ) ಮತ್ತು ಕಾರ್ಯನಿರ್ವಾಹಕ ಅಧಿಕಾರಿ ನಿರ್ಲಕ್ಷ್ಯ ವಹಿಸಿದ್ದು, ದೂರು ಬಂದ ನಂತರ ಪರಿಶೀಲನೆ ಮಾಡಿರುವುದು ಕಂಡು ಬಂದಿರುತ್ತದೆಂದು ತಿಳಿಸಿರುವುದಾಗಿ ತಿಳಿಸಿರುತ್ತಾರೆ, ಸದರಿ ಪ್ರಕರಣಕ್ಕೆ ಸಂಬಂಧಪಟ್ಟಂತೆ ಸದರಿಯವರು ಮಾನ್ಯ ನ್ಯಾಯಾಲಯದಿಂದ ಜಾಮೀನು ಪಡೆದಿರುವುದಾಗಿಯೂ, ಎಲ್ಲಾ 38 ದನದ ಕೊಟ್ಟಿಗೆಗಳು ಪೂರ್ಣ ಪ್ರಮಾಣದಲ್ಲಿ ನಿರ್ಮಾಣಗೊಂಡಿರುತ್ತದೆಂದು, ಎಲ್ಲಾ ಫಲಾನುಭವಿಗಳು ಆನ್‌ಲೈನ್ ಮೂಲಕ ತಮ್ಮ ಖಾತೆಗಳಿಗೆ ಹಣ ಪಡೆದಿರುತ್ತಾರೆಂದು ತಾವು ಯಾವುದೇ ಹಣ ದುರುಪಯೋಗ ಮಾಡಿಕೊಂಡಿರುವುದಿಲ್ಲವೆಂದು ಹಾಗೂ ತಮ್ಮ ಕರ್ತವ್ಯವನ್ನು ಮಾರ್ಗಸೂಚಿಗಳನ್ವಯ ಮಾಡಿರುವುದಾಗಿ ಅವರ ಮೇಲಿನ ಆರೋಪಗಳನ್ನು ಕೈಬಿಡುವಂತೆ ಮನವಿ ಮಾಡಿಕೊಂಡಿರುತ್ತಾರೆ.

ಮಾನ್ಯ ಪ್ರಧಾನ ಕಾರ್ಯದರ್ಶಿಯವರ ನ್ಯಾಯಾಲಯದಲ್ಲಿ ದಿನಾಂಕ:21.03.2017 ರಂದು ಮುಖ್ಯಕಾರ್ಯನಿರ್ವಾಹಕ ಅಧಿಕಾರಿ, ಬಳ್ಳಾರಿ ಯವರ ವರದಿ ಹಾಗೂ ಸದರಿಯವರು ನೀಡಿರುವ ಲಿಖಿತ ಹೇಳಿಕೆಯನ್ನು ಪರಿಶೀಲಿಸಿ, ಸರ್ಕಾರವು ಈ ಪ್ರಕರಣದಲ್ಲಿನ ವಾಸ್ತವಾಂಶಗಳನ್ನು ಮನವರಿಕೆ ಮಾಡಿಕೊಂಡು ಸದರಿ ಪ್ರಕರಣದಲ್ಲಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಮತ್ತು ಅಧ್ಯಕ್ಷರಿಗೆ ಹಣ ಪಾವತಿ ಮಾಡುವ ವಿಚಾರದಲ್ಲಿ ಇಬ್ಬರಿಗೂ ಹೊಣೆಗಾರಿಕೆ ಇರುವ ಹಿನ್ನೆಲೆಯಲ್ಲಿ ದುರ್ನಡತೆ ಸಾಬೀತಾಗಿರುತ್ತದೆ. ಇಂತಹ ಪ್ರಕರಣವನ್ನು ಸರ್ಕಾರವು ಗಂಭೀರವಾಗಿ ಪರಿಗಣಿಸಿ ಸದರಿಯವರನ್ನು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾಯ್ದೆ 1993 ರ ಪ್ರಕರಣ 43(ಎ) ಮತ್ತು 48(4) ರನ್ವಯ ಗ್ರಾಮ ಪಂಚಾಯಿತಿ ಅಧ್ಯಕ್ಷ ಸ್ಥಾನ ಹಾಗೂ ಸದಸ್ಯತ್ವ ಎರಡನ್ನೂ ತೆಗೆದು ಹಾಕಲು ನಿರ್ಣಯಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/1183/ಗ್ರಾಪಂಅ/2016**

**ಬೆಂಗಳೂರು, ದಿನಾಂಕ:-14-06-2017.**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ ಶ್ರೀ ಕಂಠಿ ವೀರೇಶ್, ಅಧ್ಯಕ್ಷರು, ನಂದಿಹಳ್ಳಿ ಗ್ರಾಮ ಪಂಚಾಯಿತಿ, ಹಡಗಲಿ ತಾಲ್ಲೂಕು, ಬಳ್ಳಾರಿ ಜಿಲ್ಲೆ, ಇವರು ಮಹಾತ್ಮಾ ಗಾಂಧಿ ರಾಷ್ಟ್ರೀಯ ಗ್ರಾಮೀಣಾ ಉದ್ಯೋಗ ಖಾತ್ರಿ ಯೋಜನೆಯಡಿಯಲ್ಲಿ ಹಣ ಪಾವತಿ ಮಾಡುವ ವಿಚಾರದಲ್ಲಿ, ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನೆಲೆಯಲ್ಲಿ ಇವರು ದುರ್ನಡತೆ ಎಸಗಿರುವುದು ಸಾಬೀತಾಗಿರುವುದರಿಂದ, ನಂದಿಹಳ್ಳಿ ಗ್ರಾಮ ಪಂಚಾಯಿತಿ ಅಧ್ಯಕ್ಷ ಸ್ಥಾನ ಹಾಗೂ ಸದಸ್ಯತ್ವ ಎರಡನ್ನೂ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾಯ್ದೆ 1993 ರ ಪ್ರಕರಣ 43(ಎ) ಮತ್ತು 48(4) ರನ್ವಯ ತೆಗೆದು ಹಾಕಿ ತಕ್ಷಣದಿಂದ ಜಾರಿಗೆ ಬರುವಂತೆ ಆದೇಶಿಸಿದೆ.

**(ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್) ಗ್ರಾಅಪ ಇಲಾಖೆ ರವರಿಂದ ಅನುಮೋದಿತ)**

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ವಿ. ಅರುಣ್‌ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಪ್ರತಿ:-

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬಳ್ಳಾರಿ ಜಿಲ್ಲೆ.

2. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಹಡಗಲಿ ತಾಲ್ಲೂಕು, ಕಲಬುರಗಿ ಜಿಲ್ಲೆ.
3. ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ನಂದಿಹಳ್ಳಿ ಗ್ರಾಮ ಪಂಚಾಯಿತಿ, ಹಡಗಲಿ ತಾಲ್ಲೂಕು, ಬಳ್ಳಾರಿ ಜಿಲ್ಲೆ.
4. ಶ್ರೀ ಕಂಠಿ ವೀರೇಶ್, ಅಧ್ಯಕ್ಷರು, ನಂದಿಹಳ್ಳಿ ಗ್ರಾಮ ಪಂಚಾಯಿತಿ, ಹಡಗಲಿ ತಾಲ್ಲೂಕು, ಬಳ್ಳಾರಿ ಜಿಲ್ಲೆ.
5. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.
6. ವೆಬ್‌ಸೈಟ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.